# GULBARGA UNIVERSITY

"Jnana Ganga", GULBARGA - 585 106, Karnataka, India.

☎: 08472-263202
Fax: 08472-263206
E-Mail: root@guluni.kar.nic.in
Grams: UNIGUL


ಸಂ.ಗುವಿಗು/ವಿಮವಿ/ಕುಸಆಶಾ/2014-15/7005

ದಿನಾಂಕ 20/11/2014

## ಪತ್ರಿಕಾ ಪ್ರಕಟಣೆ

ವಿಷಯ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ಬ್ರಿಡ್ಜ್ ಕೋರ್ಸು ಪೂರೈಸಿದ ವಿದ್ಯಾರ್ಥಿಗಳಿಗೆ ವಿವಿಧ ಪದವಿಗಳಿಗೆ ಪ್ರವೇಶ ಅನುಮತಿಸಿರುವ ಬಗ್ಗೆ

ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ವಿವಿಧ ಪದವಿ ಮಹಾವಿದ್ಯಾಲಯಗಳಲ್ಲಿ ಬಿಎ/ಬಿ.ಎಸ್ಸಿ ಬಿ.ಕಾಂ/ಬಿ.ಬಿಎಂ/ಬಿ.ಸಿ.ಎ. ಹಾಗೂ ಬಿ.ಎಸ್.ಡಬ್ಲ್ಯೂ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಗಮನಕ್ಕೆ ತರಬಯಸುವುದೇನೆಂದರೆ, ಉಚ್ಚ ನ್ಯಾಯಾಲಯದ ರಿಟ್ ಪಿಟೀಶನ್ ಸಂ. 205996 & 206013-031/2014 ದಿನಾಂಕ 14.11.2014 ರ ತೀರ್ಪಿನಂತೆ ಹಾಗೂ ದಿನಾಂಕ 18.11.2014 ರಂದು ಜರುಗಿದ ಸಿಂಡಿಕೇಟ್ ಸಭೆಯ ನಿರ್ಣಯದಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ಬ್ರಿಡ್ಜ ಕೋರ್ಸು ಪೂರೈಸಿ ಪದವಿ ಕೋರ್ಸಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ನ್ಯಾಯಾಲಯದ ನಿರ್ದೇಶನದಂತೆ ಪರೀಕ್ಷೆಗೆ ಹಾಜರಾಗಲು ಅನುಮತಿಸಲಾಗಿದೆ. ವಿದ್ಯಾರ್ಥಿಗಳು ಪಡೆದಿರುವ ಡಿಗ್ರಿ ಬ್ರಿಡ್ಜ್ ಕೋರ್ಸು, ಎರಡು ವರ್ಷದ ಪಿ.ಯು.ಸಿ ಅಥವಾ 10+2 ಕೋರ್ಸಿಗೆ ತತ್ಸಮಾನವೆಂದು ಪರಿಗಣಿಸಲು ಪೂರಕವಾಗಿರುವ ದಾಖಲೆಗಳನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಕೋರ್ಟು ನಿರ್ದೇಶನ ನೀಡಿರುವ ದಿನಾಂಕದಿಂದ 10 ದಿವಸದೊಳಗಾಗಿ ಸ್ವತ: ನೇರವಾಗಿ ವಿಶ್ವವಿದ್ಯಾಲಯಕ್ಕೆ ಸೂಕ್ತ ಸಮರ್ಥನೆಯೊಂದಿಗೆ ಸಲ್ಲಿಸತಕ್ಕದ್ದು. ಈ ಸಂಬಂಧ ವಿಶ್ವವಿದ್ಯಾಲಯದಿಂದ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ. ಈ ರೀತಿ ಸಲ್ಲಿಕೆಯಾಗುವ ದಾಖಲಾತಿಗಳನ್ನು ಪರಿಶೀಲಿಸಿ ವಿಶ್ವವಿದ್ಯಾಲಯದ ಡೀನರ ಸಮಿತಿಯು ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಮುಂದಿನ ನಾಲ್ಕು ವಾರಗಳಲ್ಲಿ ಸೂಕ್ತ ನಿರ್ಧಾರ ಕೈಕೊಳ್ಳಲಿದೆ. ಡೀನರ ಸಮಿತಿಯ ನಿರ್ಧಾರದಂತೆ ವಿದ್ಯಾರ್ಥಿಗಳ ಪ್ರವೇಶ ಮತ್ತು ಪರೀಕ್ಷಾ ಫಲಿತಾಂಶ ಸಂಬಂಧ ಸೂಕ್ತ ಕ್ರಮ ಕೈಕೊಳ್ಳಲಾಗುವುದು.

ಮುಂದುವರೆದು, ಒಂದು ವೇಳೆ ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಪ್ರವೇಶ ಅರ್ಹತೆ, ಪದವಿ ಅಧ್ಯಯನ ಹಾಗೂ ಪದವಿ ಆಧಾರಿತ ಮುಂದಿನ ಉದ್ಯೋಗಾವಕಾಶಗಳಿಗೆ ಸಂಬಂಧಿಸಿದಂತೆ ಯಾವುದಾದರೂ ಸಮಸ್ಯೆಗಳು ಉದ್ಭವಿಸಿದಲ್ಲಿ ಇದಕ್ಕೆ ವಿಶ್ವವಿದ್ಯಾಲಯವು ಯಾವುದೇ ರೀತಿಯಲ್ಲಿ ಜವಾಬ್ದಾರಿಯಲ್ಲ ಎಂಬ ವಿಷಯವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಕುಲಸಚಿವರು
ಗುಲಬರ್ಗಾ ವಿಶ್ವವಿದ್ಯಾಲಯ, ಗುಲಬರ್ಗಾ

Bos